ಆ) ಬೋಧಕೇತರ ಸಿಬ್ಬಂದಿಯ ಅವಶ್ಯವಾಗಿದ್ದು ಅದನ್ನು ತುಂಬಲು ಸರ್ಕಾರದವರು ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಹೆಚ್.ಜಿ.ಗೋವಿಂದೇಗೌಡ (ಪ್ರಾಥಮಿಕ, ಪ್ರೌಢ ಹಾಗೂ ಉನ್ನತ ಶಿಕ್ಷಣ ಸಚಿವರು):

ಅ) ಬಂದಿದೆ.

ಆ) ಬೋಧಕೇತರ ಸಿಬ್ಬಂದಿಯ ನೇಮಕಾತಿಗೆ ಆರ್ಥಿಕ ಮಿತವ್ಯಯ ಆದೇಶ ಜಾರಿಯಲ್ಲಿರುವುದರಿಂದ ನೇಮಕಾತಿ ಮಾಡಲಾಗಿಲ್ಲ. ಆರ್ಥಿಕ ಮಿತವ್ಯಯ ಆದೇಶ ರದ್ದಾದ ನಂತರ ನೇಮಕಾತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ವಿಷಯ: ಕುಮಟಾ ಸರ್ಕಾರಿ ಆಸ್ಪತ್ರೆಯಲ್ಲಿರುವ ಖಾಲಿ ಹುದ್ದೆಗಳ ಭರ್ತಿ.

966 (1506)

ಶ್ರೀ ಡಾ: ಎಂ.ಪಿ.ಕರ್ಕಿ (ಕುಮಟಾ): ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ಕುಮಟಾ ಸರ್ಕಾರಿ ಆಸ್ಪತ್ರೆಯಲ್ಲಿ ಖಾಲಿ ಇರುವ ಹುದ್ದೆಗಳು ಎಷ್ಟು? ಅವುಗಳು ಯಾವುವು?

ಆ) ಸದರಿ ಖಾಲಿ ಹುದ್ದೆಗಳನ್ನು ಯಾವಾಗ ತುಂಬಲಾಗುವುದು?

ಡಾ॥ ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಖಾಲಿ ಇರುವ ಹುದ್ದೆಗಳು - 9

ವೈದ್ಯರು - 4

ವೈದ್ಯೇತರರು - 5

ಆ) ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಸ್ನಾತಕೋತ್ತರ ವ್ಯಾಸಂಗ ಮುಗಿಸಿ, ನೇಮಕಾತಿಗಾಗಿ ಕಾಯುತ್ತಿರುವ ವೈದ್ಯರನ್ನು ನೇಮಕ ಮಾಡುವುದರ ಮೂಲಕ ಮತ್ತು ಸಾರ್ವತ್ರಿಕ ವರ್ಗಾವಣೆ 98ರಲ್ಲಿ ಭರ್ತಿ ಮಾಡಲಾಗುವುದು.

ಖಾಲಿ ಇರುವ ವೈದ್ಯೇತರ ಹುದ್ದೆಗಳನ್ನು ನೇರ ನೇಮಕಾತಿಯಿಂದ ಮತ್ತು ಸಾರ್ವತ್ರಿಕ ವರ್ಗಾವಣೆ 98ರಲ್ಲಿ ಭರ್ತಿ ಮಾಡಲಾಗುವುದು.